ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	277
ಸದಸ್ಯರ ಹೆಸರು	:	ಡಾ: ಚಂದ್ರಶೇಖರ್ ಬಿ ಪಾಟೀಲ್ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ	:	21-09-2020
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

<table>
<tr><th>ಕ್ರಮ ಸಂಖ್ಯೆ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಪಿ.ಯು. ಉಪನ್ಯಾಸಕರ ವೇತನ ತಾರತಮ್ಯವನ್ನು ಸರಿಪಡಿಸಲು ನೇಮಿಸಿದ ಕುಮಾರನಾಯಕ್ ವರದಿಯನ್ನು ಯಥಾವತ್ತಾಗಿ ಜಾರಿಗೊಳಿಸದಿರುವುದಕ್ಕೆ ಕಾರಣವೇನು? (ವಿವರ ನೀಡುವುದು)</td><td>ಶ್ರೀ ಕುಮಾರ್ ನಾಯಕ್, ಅಂದಿನ ಸರ್ಕಾರದ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಇವರ ನೇತೃತ್ವದ ಸಮಿತಿಯು ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ವರದಿಯನ್ನು ದಿನಾಂಕ:08-07-2011ರಂದು ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆ. ಸದರಿ ವರದಿಯಲ್ಲಿನ ಪ್ರಮುಖ ಶಿಫಾರಸ್ಸುಗಳು ಈ ಕೆಳಕಂಡಂತಿದೆ:
<table>
<tr><th>ಕ್ರಮ ಸಂಖ್ಯೆ</th><th>ಶಿಫಾರಸ್ಸು</th></tr>
<tr><td>1.</td><td>ಉಪನ್ಯಾಸಕರ ವೇತನ ಶ್ರೇಣಿ ರೂ. 11400-21600 ಬದಲಾಗಿ, ರೂ. 12650-23250 ಕ್ಕೆ ಪರಿಷ್ಕರಿಸುವುದು.</td></tr>
<tr><td>2.</td><td>ಪ್ರಾಚಾರ್ಯರಿಗೆ ರೂ.16400-26250 ವೇತನ ಶ್ರೇಣಿಯನ್ನು ನೀಡಿ ಪ್ರಾಚಾರ್ಯರು ಬೋಧನಾ ಕಾರ್ಯದಲ್ಲಿ ಆಸಕ್ತಿಯಿಂದ ತೊಡಗಿಸಿಕೊಳ್ಳಲು ಪೂರಕವಾಗಿ ರೂ.500/- ಗಳ ವಿಶೇಷ ಭತ್ಯೆಯನ್ನು ವಿಸ್ತರಿಸಲು ಹಾಗೂ ಪ್ರಾಚಾರ್ಯರ ಒಟ್ಟು ವೃಂದ ಬಲದ ಶೇಕಡ 25ರಷ್ಟು ಪ್ರಾಚಾರ್ಯರಿಗೆ ಸರಿಹೊಂದುವ ಆಯ್ಕೆ ಶ್ರೇಣಿ ವೇತನ ಸೌಲಭ್ಯವನ್ನು ಮಂಜೂರು ಮಾಡುವುದು.</td></tr>
<tr><td>3.</td><td>M.Phil. ಪಡೆದ ಉಪನ್ಯಾಸಕರಿಗೆ ಒಂದು ಹೆಚ್ಚುವರಿ ವಾರ್ಷಿಕ ವೇತನ ಬಡ್ತಿ ಹಾಗೂ Ph.D ಪಡೆದ ಉಪನ್ಯಾಸಕರಿಗೆ ಎರಡು ಹೆಚ್ಚುವರಿ ವಾರ್ಷಿಕ ವೇತನ ಬಡ್ತಿ ಮಂಜೂರು ಮಾಡಲು ಶಿಫಾರಸ್ಸು ಮಾಡಿದೆ.</td></tr>
<tr><td>4.</td><td>ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ 15 ವರ್ಷಗಳ ಸೇವೆ ಪೂರೈಸಿರುವ ಮತ್ತು ತಮ್ಮ ಬೋಧನಾ ವಿಷಯದಲ್ಲಿ ಶೇಕಡ 55ರಷ್ಟು ಅಂಕ ಗಳಿಸಿ, ಎನ್ಇಟಿ/ ಎಸ್ಎಲ್ಇಟಿ ಪರೀಕ್ಷೆಗಳಲ್ಲಿ ಅರ್ಹತೆ ಪಡೆದ ಉಪನ್ಯಾಸಕರಿಗೆ ಪದವಿ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡಲು ಉನ್ನತ ಶಿಕ್ಷಣ ಇಲಾಖೆಯ ಕಾಲೇಜು ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರುವುದು ಸೂಕ್ತವಾಗಿದೆ ಎಂದು ಶಿಫಾರಸ್ಸು ಮಾಡಿದೆ.</td></tr>
</table>
</td></tr>
</table>

5.	ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ ಪದವಿ ಪೂರ್ವ ಕಾಲೇಜುಗಳಲ್ಲಿ ಸೇವಾ ಸಕ್ರಮಗೊಂಡ ಉಪನ್ಯಾಸಕರ ಹಿಂದಿನ ಸೇವೆಯನ್ನು ಸಕ್ರಮಗೊಳಿಸುವುದು.
6.	ಗುತ್ತಿಗೆ ಆಧಾರದಲ್ಲಿ ನೇಮಕವಾಗಿ ಸೇವಾ ಸಕ್ರಮಗೊಂಡ ಉಪನ್ಯಾಸಕರ ಕುರಿತಂತೆ ಹೊರಡಿಸಿರುವ ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 12 ಎಸ್‌ಆರ್‌ಇ 1997 ದಿನಾಂಕ: 08-10-1999 ರಲ್ಲಿ ಗುತ್ತಿಗೆ ಶಿಕ್ಷಕರು / ಉಪನ್ಯಾಸಕರುಗಳ ಸಕ್ರಮಾತಿ ನಿಯಮಗಳು 1990 ರ ನಿಯಮ 4 (1) ಕ್ಕೆ ತಿದ್ದುಪಡಿಯ ಮರುಪರಿಶೀಲನೆ.

ಶ್ರೀ ಕುಮಾರ್ ನಾಯಕ್, ಅಂದಿನ ಸರ್ಕಾರದ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಇವರ ಸಮಿತಿಯ ಶಿಫಾರಸ್ಸುಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗಿದೆ-

ಶಿಫಾರಸ್ಸು ಸಂಖ್ಯೆ	ಕೈಗೊಂಡಿರುವ ಕ್ರಮ
1.	ಜೂನ್ 2016ರಂದು ಕಾರ್ಯನಿರ್ವಹಿಸುತ್ತಿರುವ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು /ಉಪನ್ಯಾಸಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲಾಗಿದೆ.
2.	1. ಸರ್ಕಾರದ ಆದೇಶ ಸಂಖ್ಯೆಃ ಇಡಿ 312 ಡಿಜಿಡಿ 2012 ದಿನಾಂಕ:5-9-2014ರಂತೆ ನಿಯೋಜನೆ ಭತ್ಯೆಯನ್ನು ರೂ.300/-ಗಳಿಂದ ರೂ750/-ಕ್ಕೆ ಹೆಚ್ಚಿಸಿ ಆದೇಶಿಸಿರುತ್ತದೆ. 2. ಸರ್ಕಾರದ ಆದೇಶ ಸಂಖ್ಯೆಃ ಇಡಿ 87 ಡಿಜಿಡಿ 2016 ದಿನಾಂಕ: 15-04-2016ರಂತೆ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗಿರುತ್ತದೆ. • ಪ್ರಸ್ತುತ ರೂ.500/-ಗಳ ವಿಶೇಷ ಭತ್ಯೆಯನ್ನು ಪಡೆಯುತ್ತಿರುವ ಉಪನ್ಯಾಸಕರುಗಳಿಗೆ ಸದರಿ ವಿಶೇಷ ಭತ್ಯೆಯನ್ನು ಮುಂದುವರೆಸಲಾಗಿದೆ. • ಪದವಿ ಪೂರ್ವ ಶಿಕ್ಷಣ ಇಲಾಖೆಯ ಪ್ರಾಂಶುಪಾಲರಿಗೆ ಮಾಸಿಕ ರೂ.1000/-ಗಳ ವಿಶೇಷ ಭತ್ಯೆಯನ್ನು ಮಂಜೂರು ಮಾಡಲಾಗಿದ್ದು, ದಿನಾಂಕ: 01.06.2016 ರಿಂದ ಅಂದರೆ, 2016ರ ಜೂನ್ ತಿಂಗಳ ವೇತನದಿಂದ ಜಾರಿಗೆ ಬಂದಿರುತ್ತದೆ. • ತಮ್ಮ ವೇತನ ಶ್ರೇಣಿಯ ಅಂತಿಮ

	ಹಂತವನ್ನು ತಲುಪಿರುವ ಪ್ರಾಂಶುಪಾಲರು/ ಉಪನ್ಯಾಸಕರುಗಳು ಮೇಲಿನಂತೆ ಮಂಜೂರು ಮಾಡಲಾಗಿರುವ ಒಂದು ಹೆಚ್ಚುವರಿ ವೇತನ ಬಡ್ತಿ ಸೌಲಭ್ಯವನ್ನು ಪಡೆಯಲು ಅರ್ಹರಾಗಿರುತ್ತಾರೆ. • ಮೇಲಿನ ಸೌಲಭ್ಯಗಳನ್ನು ಪದವಿ ಪೂರ್ವ ಶಿಕ್ಷಣ ಕಾಲೇಜುಗಳ ಅನುದಾನಕ್ಕೆ ಒಳಪಟ್ಟಿರುವ ಪ್ರಾಂಶುಪಾಲರು ಮತ್ತು ಉಪನ್ಯಾಸಕರುಗಳಿಗೂ ಸಹ ವಿಸ್ತರಿಸಲಾಗಿದೆ.
3.	Ph.D ಅಥವಾ M.Phil. ಪಡೆದ ಉಪನ್ಯಾಸಕರಿಗೆ ಹೆಚ್ಚುವರಿ ವಾರ್ಷಿಕ ವೇತನ ಬಡ್ತಿ ನೀಡುವ ಬಗ್ಗೆ ಪರಿಶೀಲನೆಯಲ್ಲಿರುತ್ತದೆ.
4.	NET/SLET ಪರೀಕ್ಷೆ ತೇರ್ಗಡೆ ಹೊಂದಿದ ಪದವಿ ಪೂರ್ವ ಉಪನ್ಯಾಸಕರುಗಳನ್ನು ಪದವಿ ಕಾಲೇಜಿಗೆ ಬಡ್ತಿ ನೀಡುವ ಶಿಫಾರಸ್ಸನ್ನು ಉನ್ನತ ಶಿಕ್ಷಣ ಇಲಾಖೆಯು ಒಪ್ಪಿರುವುದಿಲ್ಲ.
5.	ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ ಪದವಿ ಪೂರ್ವ ಕಾಲೇಜುಗಳಲ್ಲಿ ಸೇವಾ ಸಕ್ರಮಗೊಂಡ ಉಪನ್ಯಾಸಕರ ಹಿಂದಿನ ಸೇವೆಯನ್ನು ಸಕ್ರಮಗೊಳಿಸುವ ಬಗ್ಗೆ ವ್ಯವಹರಣೆ ನಡೆಸಲಾಗುತ್ತಿದೆ.
6.	ಗುತ್ತಿಗೆ ಆಧಾರದ ಮೇಲೆ ನೇಮಕವಾಗಿ ಸೇವಾ ಸಕ್ರಮಗೊಂಡ ಉಪನ್ಯಾಸಕರ ಕುರಿತಂತೆ ಹೊರಡಿಸಿರುವ ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 12 ಎಸ್‌ಆರ್‌ಇ 1997 ದಿನಾಂಕ: 08–10–1999 ರಲ್ಲಿ ಗುತ್ತಿಗೆ ಶಿಕ್ಷಕರು / ಉಪನ್ಯಾಸಕರುಗಳ ಸಕ್ರಮಾತಿ ನಿಯಮಗಳು 1990ರ ನಿಯಮ 4(1)ಕ್ಕೆ ತಿದ್ದುಪಡಿಯ ಮರುಪರಿಶೀಲನೆ ಬಗ್ಗೆ ಶ್ರೀ ಶ್ರೀಕಂಠೇಗೌಡ, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು ಇವರ ನೇತೃತ್ವದ ಸಮಿತಿಯನ್ನು ರಚಿಸಲಾಗಿದ್ದು, ಸಮಿತಿಯು ವರದಿ ಸಲ್ಲಿಸಿದ ನಂತರ ಪ್ರಸ್ತಾವನೆಯನ್ನು ಪರಿಶೀಲಿಸಲಾಗುತ್ತಿದೆ.

ಶ್ರೀ ಕುಮಾರ್ ನಾಯಕ್ ಸಮಿತಿಯ ವರದಿಯಲ್ಲಿನ ಒಟ್ಟು ಆರು ಶಿಫಾರಸ್ಸುಗಳ ಪೈಕಿ ಎರಡು ಶಿಫಾರಸ್ಸುಗಳನ್ನು ಜಾರಿಗೊಳಿಸಲಾಗಿದೆ.

NET/SLET ಪರೀಕ್ಷೆ ತೇರ್ಗಡೆ ಹೊಂದಿದ ಪದವಿ ಪೂರ್ವ ಉಪನ್ಯಾಸಕರುಗಳನ್ನು ಪದವಿ ಕಾಲೇಜಿಗೆ ಬಡ್ತಿ ನೀಡುವ ಶಿಫಾರಸ್ಸನ್ನು ಉನ್ನತ ಶಿಕ್ಷಣ ಇಲಾಖೆಯು ಒಪ್ಪದಿರುವುದರಿಂದ

		ಜಾರಿಗೆ ತರಲು ಸಾಧ್ಯವಿಲ್ಲ. ಉಳಿದ ಮೂರು ಶಿಫಾರಸ್ಸುಗಳನ್ನು ಜಾರಿಗೊಳಿಸುವ ಬಗ್ಗೆ ವ್ಯವಹರಣೆ ನಡೆಸಲಾಗುತ್ತಿದೆ.

ಸಂಖ್ಯೆ: ಇಪಿ 117 ಡಿಜಿಡಬ್ಲ್ಯೂ 2020

S. S.

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.